# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ದಿದ್ದಿಗಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ದಾವಣಗೆರೆ ಇವರ ಪತ್ರ ಸಂಖ್ಯೆ:ಜಿಪಂದಾಆ(2):ಗ್ರಾಪಂ:ಸಿಆರ್:09/2017-18, ದಿನಾಂಕ:26-04-2017 ಮತ್ತು 06-05-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ:06-07-2017.
3) ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ದಿದ್ದಿಗಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಲಿಖಿತ ಹೇಳಿಕೆ ದಿನಾಂಕ:30-11-2017.
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:28-10-2017 ಮತ್ತು 10-11-2017.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ದಾವಣಗೆರೆ ರವರ ಪತ್ರದಲ್ಲಿ ಜಗಳೂರು ತಾಲ್ಲೂಕು, ದಿದ್ದಿಗಿ ಗ್ರಾಮ ಪಂಚಾಯತಿಯಲ್ಲಿ 2016-17ನೇ ಸಾಲಿನ 14ನೇ ಹಣಕಾಸು ಮತ್ತು ವರ್ಗ-1, ವರ್ಗ-2ರ ಹಾಗೂ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನದಲ್ಲಿ ಹಣ ದುರುಪಯೋಗವಾದ ಬಗ್ಗೆ ದೂರು ಬಂದ ಹಿನ್ನಲೆಯಲ್ಲಿ ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ & ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ.) & (ಎಸ್.ಜಿ.ಎಸ್.ವೈ.) ಜಿಲ್ಲಾ ಪಂಚಾಯತ್ ದಾವಣಗೆರೆ ರವರಿಂದ ತನಿಖೆ ನಡೆಸಿ ವರದಿಯನ್ನು ಸಲ್ಲಿಸಿರುತ್ತಾರೆ.

ಸದರಿ ವರದಿಯಲ್ಲಿ 2016-17ನೇ ಸಾಲಿನ 14ನೇ ಹಣಕಾಸು ಯೋಜನೆಯಡಿ ಚೆಕ್ ಮೂಲಕ ರೂ.28,36,936/-ಗಳನ್ನು ವೆಚ್ಚ ಮಾಡಿದ್ದು, ವೆಚ್ಚಕ್ಕೆ ಸಂಬಂಧಿಸಿದಂತೆ ನಗದು ಪುಸ್ತಕ ಮತ್ತು ವೋಚರ್‌ಗಳನ್ನು ಲೆಕ್ಕ ತನಿಖೆಗೆ ಒದಗಿಸದೇ ಇರುವುದರಿಂದ ರೂ.28,36,936/-ಗಳು ತಾತ್ಕಾಲಿಕ ದುರುಪಯೋಗವಾಗಿರುವುದು ಕಂಡುಬರುತ್ತದೆ ಹಾಗೂ ವರ್ಗ-2ರ ಕಂದಾಯ ವಸೂಲಾತಿ ರೂ.1,02,824/-ಗಳು ಆಗಿದ್ದು, ಬ್ಯಾಂಕಿಗೆ ರೂ.70,109/-ಗಳು ಜಮೆ ಮಾಡಿದ್ದು, ರೂ.32,715/-ಗಳು ಕಡಿಮೆ ಜಮೆ ಮಾಡಿರುತ್ತಾರೆ.

2016-17ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಒಟ್ಟು 43 ಕಾಮಗಾರಿಗಳ ಅನುಷ್ಠಾನದಲ್ಲಿ ರೂ.68,59,704/-ಗಳು ದುರುಪಯೋಗವಾಗಿರುವುದು ತನಿಖಾ ವರದಿಯಿಂದ ಕಂಡುಬಂದಿರುವುದೆಂದು ತಿಳಿಸಿರುತ್ತಾರೆ. ಸರ್ಕಾರದ ಹಣ ದುರುಪಯೋಗಕ್ಕೆ ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ದಿದ್ದಿಗಿ ಗ್ರಾಮ ಪಂಚಾಯತಿ ಇವರು ಪರೋಕ್ಷವಾಗಿ ಸಹಕರಿಸಿರುವುದು ಕಂಡು ಬರುತ್ತದೆ ಹಾಗೂ ಆ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ಮಂಜುಳ ರವರು ಜವಾಬ್ದಾರರಾಗಿರುವುದರಿಂದ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

ಅದರಂತೆ ಮೇಲೆ ಓದಲಾದ (3) ರಲ್ಲಿ ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರು ಸರ್ಕಾರದಿಂದ ನೀಡಲಾದ ಕಾರಣ ಕೇಳಿ ನೋಟೀಸಿಗೆ ಈ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ನಾನು ಅಧ್ಯಕ್ಷರಾಗಿ ಕೆಲಸ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಕೆಲ ಪ್ರಭಾವಿ ರಾಜಕೀಯ ಮುಂಖಂಡರುಗಳು ನನ್ನ ಮೇಲೆ ಹಣ ದುರುಪಯೋಗವಾಗಿದೆ ಎಂದು ಸುಳ್ಳು ಆರೋಪ ಮಾಡಿ ಪ್ರಕರಣ ದಾಖಲಿಸಿ 30 ತಿಂಗಳ ಅವದಿಗೂ ಮುಂಚೆ ಅವಿಶ್ವಾಸ ಮಾಡಿ ಅಧ್ಯಕ್ಷ ಸ್ಥಾನದಿಂದ ಪದಚ್ಯುತಿಗೊಳಿಸಿರುತ್ತಾರೆ. ನಂತರ ಇಲಾಖೆ ತನಿಖೆ ನಡೆಸಿದ ನಂತರ ನಿರಪರಾಧಿ ಎಂದು ಇಲಾಖೆಯಿಂದ ತಿಳಿದುಬಂದಿದೆ ಎಂದು ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ".

ಮೇಲೆ ಓದಲಾದ (4) ರನ್ವಯ ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ:09-11-2017 ಮತ್ತು 21-12-2017 ರಂದು ಜರುಗಿದ ವಿಚಾರಣೆಯಲ್ಲಿ ಕಾರ್ಯದರ್ಶಿ, ದಿದ್ದಿಗಿ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿ ಅಧಿಕಾರಿಗಳು ಹಾಗೂ ಆಪಾದಿತ ಅಧ್ಯಕ್ಷರು ಹಾಜರಿರುತ್ತಾರೆ.

ಸರ್ಕಾರವು ಈ ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲಾತಿಗಳನ್ನು, ಹೇಳಿಕೆಗಳನ್ನು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ರವರು ಸಲ್ಲಿಸಿರುವ ವರದಿಯನ್ನು ಪರಿಶೀಲಿಸಲಾಗಿ, ಆಪಾದಿತ ಸದಸ್ಯರ ಮೇಲಿನ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರನ್ವಯ ಸದರಿಯವರ ಸದಸ್ಯತ್ವ ಸ್ಥಾನವನ್ನು ರದ್ದುಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 769 ಗ್ರಾಪಂಅ 2017 ಬೆಂಗಳೂರು, ದಿನಾಂಕ:22-10-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ದಿದ್ದಿಗಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಮೇಲಿನ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರನ್ವಯ ದಿದ್ದಿಗಿ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ರದ್ದುಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/x

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ:**

1) ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಜಗಳೂರು, ದಾವಣಗೆರೆ ಜಿಲ್ಲೆ.
4) ಶ್ರೀಮತಿ ಮಂಜುಳ, ಮಾಜಿ ಅಧ್ಯಕ್ಷರು, ಹಾಲಿ ಸದಸ್ಯರು, ದಿದ್ದಿಗಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದಿದ್ದಿಗಿ ಗ್ರಾಮ ಪಂಚಾಯತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
6) ಕಛೇರಿ ಪ್ರತಿ / ಹೆಚ್ಚುವರಿ ಪ್ರತಿ.
7) ಗಣಕ ಕೋಶ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್); ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.